ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 241 ಕೆಎಸ್ಎಸ್ 2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು. ದಿನಾಂಕ : 14.11.2016.

## ಅಧಿಸೂಚನೆ

ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಗೆ ಸೇರಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವೃಂದದಿಂದ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 241 ಕೆಎಸ್ಎಸ್ 2015, ದಿನಾಂಕ:21.10.2016 ರಲ್ಲಿ ಕರ್ನಾಟಕ ನಾಗರೀಕ ಸೇವಾ (ಮುಂಬಡ್ತಿ, ವೇತನ ಮತ್ತು ಪಿಂಚಣಿ ಕ್ರಮಬದ್ಧತೆ) ನಿಯಮಾವಳಿಗಳು 1978ರ ನಿಯಮ 2(1)(ಸಿ) ಮತ್ತು ನಿಯಮ 2(2) ರನ್ವಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವೃಂದದಲ್ಲಿ ಜೇಷ್ಠತೆಯಲ್ಲಿ ಇವರುಗಳಿಗಿಂತ ಕಿರಿಯರಾದವರಿಗೆ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗೆ ಮುಂಬಡ್ತಿ ನೀಡಿದ ದಿನಾಂಕ:13.08.2013ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಲಾಗಿದೆ. ಸದರಿ ಮುಂಬಡ್ತಿ ಮೇಲೆ ನೇಮಕಗೊಂಡ ಈ ಕೆಳಕಂಡ ನಿವೃತ್ತ ಅಧಿಕಾರಿಗಳಿಗೆ ಅವರ ಹೆಸರಿನ ಮುಂದೆ ಅಂಕಣ – 4 ರಲ್ಲಿ ನಮೂದಿಸಿರುವ ದಿನಾಂಕಗಳಂದು ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿದ್ದಾರೆಂದು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 19(3) (ಸಿ) ರನ್ವಯ ಘೋಷಿಸಿದೆ.

| ಕ್ರಮ ಸಂ. | ಅಧಿಕಾರಿಯ ಹೆಸರು ಮತ್ತು ಪದನಾಮ | ಸಹಾಯಕ ನಿರ್ದೇಶಕರು (ಗ್ರಾ.ಉ) ಹುದ್ದೆಗೆ ಪೂರ್ವಾನ್ವಯವಾಗಿ ಮುಂಬಡ್ತಿಗೆ ಪರಿಗಣಿಸಲಾದ ದಿನಾಂಕ | ಸ್ಥಾನಪನ್ನ ಅವಧಿ ಪೂರೈಸಿದ ದಿನಾಂಕ |
|---|---|---|---|
| 1 | 2 | 3 | 4 |
| 1 | ಶ್ರೀಮತಿ ಹೇಮಾವತಿ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) (ನಿವೃತ್ತ) | 13.08.2013 | 12.08.2014 |

| | | | |
|---|---|---|---|
| 2 | ಶ್ರೀ ಕೆ.ರಂಗೇಗೌಡ<br>ಸಹಾಯಕ ನಿರ್ದೇಶಕರು<br>(ಗ್ರಾಮೀಣ ಉದ್ಯೋಗ) (ನಿವೃತ್ತ) | 13.08.2013 | 12.08.2014 |
| 3 | ಶ್ರೀ ಟಿ.ಹನುಮಂತೇಗೌಡ<br>ಸಹಾಯಕ ನಿರ್ದೇಶಕರು<br>(ಗ್ರಾಮೀಣ ಉದ್ಯೋಗ) (ನಿವೃತ್ತ) | 13.08.2013 | 12.08.2014 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು ( ಎ ಮತ್ತು ಇ ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಾಸನ.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು – ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ:4891–93/2015 ಮತ್ತು ನ್ಯಾಯಾಲಯ ನಿಂದನಾ ಅರ್ಜಿ ಸಂಖ್ಯೆ:709–711/2016ಗಳಿಗೆ ಸಂಬಂಧಿಸಿದಂತೆ ಆದೇಶ ಹೊರಡಿಸಲಾಗಿದ್ದು, ಸದರಿ ಆದೇಶವನ್ನು ಮಾನ್ಯ ಆಡಳಿತ ನ್ಯಾಯಮಂಡಳಿಯ ಆದ್ಯ ಗಮನಕ್ಕೆ ತಂದು ರಿಟ್ ಅರ್ಜಿ ಹಾಗೂ ನಿಂದನಾ ಅರ್ಜಿಗಳನ್ನು ಕೈಬಿಡುವಂತೆ ಕೋರಲು ವಿನಂತಿಸಿದೆ.
6. ಸಂಬಂಧಿಸಿದ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ, ಇವರ ಮುಖಾಂತರ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಜಂಟಿ ಕಾರ್ಯದರ್ಶಿ (ಆಡಳಿತ–2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.